## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಡಿಕೇರಿ ಇವರ ಉಪಯೋಗಕ್ಕಾಗಿ ಹೊಸ ವಾಹನ ಖರೀದಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಡಿಕೇರಿ ಇವರ ಪತ್ರ ಸಂಖ್ಯೆ: ಕೊಜಿಪಂ: ಆಡಳಿತ:ಸೇವೆ-6:2015-16 ದಿನಾಂಕ 30.3.2017.

:-:

**ಪ್ರಸ್ತಾವನೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಡಿಕೇರಿ ಇವರು ಮೇಲೆ ಓದಲಾದ ದಿನಾಂಕ 30.03.2017ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮಡಿಕೇರಿ ಇವರ ಉಪಯೋಗಕ್ಕಾಗಿ ಬಳಸುತ್ತಿರುವ ವಾಹನ ಸಂಖ್ಯೆ: ಕೆಎ 12 ಜಿ 291 ಅಂಬಾಸೆಡರ್ 2001 ಅನುಪಯುಕ್ತವಾಗಿರುವ ಕಾರಣ ಹೊಸ - ಮಹೇಂದ್ರ ಬೊಲೆರೋ ವಾಹನವನ್ನು ಹಾಗೂ ಸದರಿ ವೆಚ್ಚವನ್ನು ಜಿಲ್ಲಾ ಪಂಚಾಯತ್ ಲೆಕ್ಕ ಶೀರ್ಷಿಕೆ "2515-00-101-0-28 (ಯೋಜನೇತರ)" ರಲ್ಲಿ ಲಭ್ಯವಿರುವ ಅನುದಾನದಲ್ಲಿ ಭರಿಸಲು ಸರ್ಕಾರದ ಅನುಮತಿಯನ್ನು ಕೋರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಡಿಕೇರಿ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 87 ಕೆಎಸ್ಎಸ್ 2017 ಬೆಂಗಳೂರು ದಿನಾಂಕ 22.9.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಡಿಕೇರಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಉಪಯೋಗಕ್ಕಾಗಿ ಲೆಕ್ಕ ಶೀರ್ಷಿಕೆ "2515-00-101-0-28 (ಯೋಜನೇತರ)" ಭರಿಸಿ ಹೊಸ ವಾಹನವನ್ನು ಖರೀದಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರವು ಮಂಜೂರಾತಿ ನೀಡಿದೆ.

1. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 174 ಶಿವಾನಿ 2007 ದಿನಾಂಕ 12.05.2008 ರಲ್ಲಿ ನಿಗದಿಪಡಿಸಿರುವ 6.50 ಲಕ್ಷಗಳ (ಆರು ಲಕ್ಷದ ಐವತ್ತು ಸಾವಿರ ರೂ.ಗಳು ಮಾತ್ರ) (ತೆರಿಗೆ ಹೊರತುಪಡಿಸಿ) ಮಿತಿಯೊಳಗೆ ಖರೀದಿಸುವುದು

2. ಹಳೆಯ ವಾಹನವನ್ನು ನಿಯಮಾನುಸಾರ ವಿಲೇವಾರಿ ಮಾಡಿ ಅದರಿಂದ ಬರುವ ಮೌಲ್ಯವನ್ನು ಸರ್ಕಾರಿ ಲೆಕ್ಕ ಶೀರ್ಷಿಕೆಗೆ ಜಮಾ ಮಾಡುವುದು.
3. ಸದರಿ ಹೊಸ ವಾಹನ ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ ಹಾಗೂ ಅದರಡಿ ರಚಿಸಿರುವ ನಿಯಮಗಳನ್ನು ಪಾಲಿಸತಕ್ಕದ್ದು.
4. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 239 ವೆಚ್ಚ-6/2017 ದಿನಾಂಕ 01.09.2017 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

23/9/17

(ಡಿ.ಎಸ್.ವಿಜಯ್)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಗೆ:

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಡಿಕೇರಿ
3. ಖಜಾನಾಧಿಕಾರಿ, ಜಿಲ್ಲಾ ಖಜಾನೆ, ಮಡಿಕೇರಿ
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
6. ಜಂಟಿ ಕಾರ್ಯದರ್ಶಿ (ಆಡಳಿತ-2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
7. ಮೇಲ್ವಿಚಾರಕರು, ಗಣಕ ಕೋಶ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
8. ಮಾಹಿತಿ ಕೇಂದ್ರ/ ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.